# ದಿನಾಂಕ: 28-08-2010ರಂದು ಪೂರ್ವಾಹ್ನ: 11-00ಗಂಟೆಗೆ ಹೇಮಾವತಿ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳು

## ಅಧ್ಯಕ್ಷತೆ: ಶ್ರೀ ಬಿ.ಆರ್. ನೀಲಪ್ಪ

## ಅಧ್ಯಕ್ಷರು,

## ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ

ಹಾಜರಿ: 07 ಗೈರು ಹಾಜರಿ: 00

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಉಪ ಕಾರ್ಯದರ್ಶಿ(ಆಡಳಿತ) ಇವರು ಸಭೆಗೆ ಹಾಜರಿದ್ದ ಮಾನ್ಯ ಸಮಿತಿ ಅಧ್ಯಕ್ಷರು, ಸದಸ್ಯರು, ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಯವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡಬೇಕೆಂದು ಮಾನ್ಯ ಸಮಿತಿ ಅಧ್ಯಕ್ಷರನ್ನು ಕೋರಿದರು. | |
| | | ಉಪಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಪ್ರಸಕ್ತ ಸಾಲಿನಲ್ಲಿ ಶಿಕ್ಷಣ ಇಲಾಖೆಯ ಸೇರ್ಪಡೆ ಮತ್ತು ಮಾರ್ಪಾಡು ಯೋಜನೆಯಡಿಯಲ್ಲಿ ರೂ.30.00ಲಕ್ಷ ಅನುದಾನ ಲಭ್ಯವಿದ್ದು, ಇಲ್ಲಿಯವರೆಗೆ ಸರ್ಕಾರದಿಂದ ರೂ.15.00ಲಕ್ಷ ಅನುದಾನ ಬಿಡುಗಡೆಯಾಗಿದ್ದು, ಕಟ್ಟಡಗಳ ಪಟ್ಟಿಯನ್ನು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ಕಳುಹಿಸಿ ಅನುದಾನ ವ್ಯಪಗತವಾಗದ ರೀತಿಯಲ್ಲಿ ವಿನಿಯೋಗಿಸಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಕ್ರಮ ವಹಿಸಬೇಕೆಂದು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಹಾಸನ ಮತ್ತು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಿದರು.<br>ಸರ್ವ ಶಿಕ್ಷ ಅಭಿಯಾನ ಯೋಜನೆಯಡಿಯಲ್ಲಿ ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಯೋಜನೆಯಗಳು ಮಂಜೂರಾಗಿವೆ ಎಂಬ ಬಗ್ಗೆ ಯೋಜನೆವಾರು ವಿವರಗಳನ್ನು ಸಮಿತಿಯ ಸದಸ್ಯರುಗಳಿಗೆ ನೀಡಲು ಕ್ರಮ ವಹಿಸಬೇಕೆಂದು ತಿಳಿಸಿದರು ಹಾಗೂ ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿಯಲ್ಲಿ ಮಂಜೂರಾಗಿರುವ ಕಟ್ಟಡಗಳನ್ನು ಉತ್ತಮ ಗುಣಮಟ್ಟದಲ್ಲಿ ಅನುಷ್ಠಾನ ಮಾಡುವ ಬಗ್ಗೆ ಶಿಕ್ಷಣಾಧಿಕಾರಿ, ಸರ್ವ ಶಿಕ್ಷಣ ಅಭಿಯಾನ, ಹಾಸನ ಇವರು ಮೇಲುಸ್ತುವಾರಿಯನ್ನು ಮಾಡಲು ಕ್ರಮ ವಹಿಸಬೇಕೆಂದು ತಿಳಿಸಿದರು. | ಸಭೆಯಲ್ಲಿ ಚರ್ಚಿಸಿದಂತೆ, ಅಂಗನ ವಾಡಿ ಕೇಂದ್ರಗಳಿಗೂ ಸಹ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಮತ್ತು 12ನೇ ಹಣಕಾಸು ರಸ್ತೆ ಯೋಜನೆ ಯಡಿಯಲ್ಲಿ ಇನ್ನೂ ಬಾಕಿ ಉಳಿದಿರುವ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

| | | |
|---|---|---|
| | ಅಕ್ಷರ ದಾಸೋಹ ಕಾರ್ಯಕ್ರಮದಡಿಯಲ್ಲಿ ಆಹಾರ ಸಾಮಗ್ರಿಗಳಿಗೆ ಅನುಮೋದನೆ ಆಗಿದೆಯೇ ಎಂಬ ಬಗ್ಗೆ ವಿವರ ನೀಡಬೇಕೆಂದು ಶಿಕ್ಷಣಾಧಿಕಾರಿ, ಅಕ್ಷರ ದಾಸೋಹ, ಜಿಲ್ಲಾ ಪಂಚಾಯಿತಿ, ಹಾಸನ ಇವರಿಗೆ ತಿಳಿಸಿದರು.<br>ಶಿಕ್ಷಣಾಧಿಕಾರಿಯವರು ಉತ್ತರಿಸುತ್ತಾ, ಅಕ್ಟೋಬರ್ 2010 ಮಾಹೆಯಿಂದ ಮೇ 2011 ರವರೆಗೆ ಆಹಾರ ಸಾಮಗ್ರಿಗಳನ್ನು ಸರಬರಾಜು ಮಾಡುವ ಬಗ್ಗೆ ಟೆಂಡರ್ ಕರೆಯಲಾಗಿತ್ತು. ಆದರೆ, ತೊಗರಿ ಬೇಳೆಯ ದರವು ಆಗಿಂದಾಗ್ಗೆ ಬದಲಾವಣೆ ಆಗುವುದರಿಂದ, ಯಾವುದೇ ಟೆಂಡರ್ ದಾರರು ಒಪ್ಪಿರುವುದಿಲ್ಲ. ಸಧ್ಯಕ್ಕೆ ಕರ್ನಾಟಕ ರಾಜ್ಯ ಆಹಾರ ನಿಗಮದಿಂದ ಖರೀದಿಸಲಾಗುತ್ತಿದೆ ಎಂದು ಸಭೆಗೆ ವಿವರ ನೀಡಿದರು.<br>ಹಾಸನ ಜಿಲ್ಲೆಯಲ್ಲಿ ಅಕ್ಷರ ದಾಸೋಹ ಕಾರ್ಯಕ್ರಮದಡಿ ಶಾಲೆಗಳಲ್ಲಿ ಗ್ಯಾಸ್ ಸಿಲಿಂಡರ್ ಗಳು ಹೆಚ್ಚಿನ ಸಂಖ್ಯೆಯಲ್ಲಿ ಕಳವು ಆಗಿರುತ್ತವೆ. ಆದ್ದರಿಂದ, ಸಿಲಿಂಡರ್ ಗಳನ್ನು ಸಮರ್ಪಕವಾಗಿ ಇಟ್ಟುಕೊಳ್ಳುವ ಬಗ್ಗೆ ಅಗತ್ಯ ಕ್ರಮ ವಹಿಸಬೇಕೆಂದು ಶಿಕ್ಷಣಾಧಿಕಾರಿಯವರಿಗೆ ತಿಳಿಸಲಾಯಿತು.<br>ಶಿಕ್ಷಣಾಧಿಕಾರಿಯವರು ಉತ್ತರಿಸುತ್ತಾ, ಸಿಲಿಂಡರ್ ಗಳನ್ನು ಸಮರ್ಪಕವಾಗಿ ಇಟ್ಟುಕೊಳ್ಳುವ ಬಗ್ಗೆ ಶಾಲೆಯ ಮುಖ್ಯೋಪಾಧ್ಯಾಯರು ಮತ್ತು ಅಡುಗೆಯವರ ಮೇಲೆ ಜವಾಬ್ದಾರಿಯನ್ನು ಹೊರಿಸಬೇಕೆಂದು ಒಂದುವೇಳೆ ಸಿಲಿಂಡರ್ ಗಳು ಕಳ್ಳತನವಾದಲ್ಲಿ ಶಾಲಾ ಮುಖ್ಯೋಪಾಧ್ಯಾಯರುಗಳ ಮೇಲೆ ಕ್ರಿಮಿನಲ್ ಮೊಖದ್ದಮೆ ಹೂಡಬೇಕೆಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ತಮ್ಮ ಪತ್ರದಲ್ಲಿ ತಿಳಿಸಿರುತ್ತಾರೆಂದು ವಿವರ ನೀಡಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಗ್ಯಾಸ್ ಸಿಲಿಂಡರ್ ಕಳ್ಳತನವಾಗಿರುವ ಶಾಲೆಗಳ ಮುಖ್ಯೋಪಾಧ್ಯಾಯರುಗಳ ಮೇಲೆ ಕ್ರಮಿನಲ್ ಮೊಖದ್ದಮೆ ಹೂಡಿದಲ್ಲಿ ಇತರೆ ಶಾಲೆಗಳವರು ಹೆಚ್ಚಿನ ಜವಾಬ್ದಾರಿಯಿಂದ ಬಂದೋಬಸ್ತಿನಲ್ಲಿ ಸಿಲಿಂಡರ್ ಗಳನ್ನು ಇಟ್ಟುಕೊಳ್ಳುತ್ತಾರೆಂದು ತಿಳಿಸಿದರು. ಶಿಕ್ಷಣ ಇಲಾಖೆಯಲ್ಲಿ ಸಾಕಷ್ಟು ಸಿಬ್ಬಂದಿಯವರು ಇರುವುದರಿಂದ, ಸಿಲಿಂಡರ್ ಗಳ ಕಳ್ಳತನವನ್ನು ಕಡಿಮೆ ಮಾಡಲು ಕ್ರಮ ವಹಿಸಬೇಕೆಂದು ಮತ್ತು ಈ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಯವರು ಹೆಚ್ಚಿನ ಗಮನವನ್ನು ನೀಡಬೇಕೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಹೆಚ್.ಡಿ.ರಾಮೇಗೌಡರವರು ಮಾತನಾಡುತ್ತಾ, ಪ್ರೌಢಶಾಲೆ ಮತ್ತು ಪ್ರಾಥಮಿಕ ಶಾಲೆಗಳ ನಡುವಿನ ಬೇರೆ ಬೇರೆ ಕಟ್ಟಡಗಳಲ್ಲಿ ನಡೆಯುತ್ತಿದ್ದು, ಅವುಗಳ ನಡುವಿನ ದೂರ ½ ಕಿಲೋಮೀಟರ್ ಗಿಂತ ಹೆಚ್ಚಾಗಿರುತ್ತದೆ. ಆದರೆ, ಪ್ರೌಢಶಾಲೆ/ಪ್ರಾಥಮಿಕ ಶಾಲೆಗಳ ವಿದ್ಯಾರ್ಥಿಗಳಿಗೆ ಒಂದೇ ಕಡೆ ಅಡುಗೆಯನ್ನು ಮಾಡುತ್ತಿದ್ದು, ಮಕ್ಕಳು ಒಂದು ಶಾಲೆಯಿಂದ ಇನ್ನೊಂದು ಶಾಲೆಗೆ ಬಂದು ಊಟ ಮಾಡಿಕೊಂಡು ಹೋಗಲು ತೊಂದರೆಯಾಗಿರುತ್ತದೆ. ಆದ್ದರಿಂದ, ಈ ಬಗ್ಗೆ ಪರಿಶೀಲಿಸಿ ಪ್ರತ್ಯೇಕವಾಗಿ ಅಡುಗೆಯನ್ನು ಮಾಡಲು ಸೂಕ್ತ ನಿರ್ದೇಶನ ನೀಡಬೇಕೆಂದು ಮತ್ತು ಕಂಪ್ಯೂಟರ್ ಗಳನ್ನು ಹೊಂದಿರುವ ಪ್ರೌಢಶಾಲೆಗಳಿಗೆ ರಾತ್ರಿ ಕಾವಲುಗಾರರನ್ನು ನೇಮಿಸಬೇಕೆಂದು ಕೋರಿದರು. | ವಯಸ್ಕರ ಶಿಕ್ಷಣ ಇಲಾಖೆಯ ಸಿ.ಎಲ್.ವಿ.ಟಿ.ಸಿ ಯೋಜನೆಯಡಿ ಮುಂದುವರಿಕೆ ಶಿಕ್ಷಣ ಕೇಂದ್ರಗಳಲ್ಲಿ ಕೆಲಸ ನಿರ್ವಹಿಸಿದ ಸ್ವಯಂ ಸೇವಕರುಗಳಿಗೆ 5 ತಿಂಗಳ ಬಾಕಿ ವೇತನವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಮಕ್ಕಳಿಗೆ ಮದ್ಯಾಹ್ನದ ಊಟವನ್ನು ಮಾಡಲು ತೊಂದರೆಯಾಗದಂತೆ ಪ್ರತ್ಯೇಕವಾಗಿ ಆಯಾ ಶಾಲೆಗಳಲ್ಲಿಯೇ ಅಡುಗೆಯನ್ನು ಮಾಡಲು ಕ್ರಮ ವಹಿಸಬೇಕೆಂದು ಶಿಕ್ಷಣಾಧಿಕಾರಿ, ಅಕ್ಷರ ದಾಸೋಹರವರಿಗೆ ತಿಳಿಸಿದರು.

ಮುಂದುವರೆದು, ಜಿಲ್ಲೆಯಲ್ಲಿ ಜಲಮಣಿ ಯೋಜನೆಯನ್ನು ಅನುಷ್ಠಾನ ಮಾಡಲು ಗುರಿಯನ್ನು ನೀಡಲಾಗಿದ್ದು, ಈ ಬಗ್ಗೆ ಸುತ್ತೋಲೆ ಬಂದು ಒಂದೂವರೆ ವರ್ಷವಾಗಿರುತ್ತದೆ. ಜಿಲ್ಲೆಯಲ್ಲಿ ಮೊದಲನೇ ಹಂತದ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸುವ ಬಗ್ಗೆ ಒಂದು ವಾರದಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರ ಜೊತೆಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾಹಿತಿಯನ್ನು ನೀಡುವಂತೆ ತಿಳಿಸಿದರು.

ಎರಡನೇ ಹಂತದ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲು ಶಾಲೆಗಳ ಪಟ್ಟಿಯನ್ನು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ನೀಡಲು ಕ್ರಮ ವಹಿಸಬೇಕೆಂದು ತಿಳಿಸಿದರು. ಒಂದುವೇಳೆ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲು ಸಮಸ್ಯೆಗಳಿದ್ದಲ್ಲಿ ಸಂಬಂಧಪಟ್ಟ ಜಿಲ್ಲಾ ಪಂಚಾಯತ್ ಸದಸ್ಯರುಗಳ ಗಮನಕ್ಕೆ ತರಬೇಕೆಂದು ತಿಳಿಸಿದರು ಮತ್ತು ದಿನಾಂಕ: 31-08-2010ರ ಒಳಗಾಗಿ ಶಾಲೆಗಳ ಪಟ್ಟಿಯನ್ನು ಸಲ್ಲಿಸುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಯವರಿಗೆ ತಿಳಿಸಿದರು.

ಅಂಗನವಾಡಿ ಕೇಂದ್ರಗಳಿಗೂ ಸಹ ಜಲಮಣಿ ಯೋಜನೆಯಡಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲು ಕ್ರಮ ವಹಿಸಬೇಕೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸೂಚಿಸಿದ್ದು, ಅಂಗನವಾಡಿ ಕೇಂದ್ರಗಳಿಗೂ ಶುದ್ಧಕುಡಿಯುವ ನೀರಿನ ಘಟಕಗಳನ್ನು ಅಳವಡಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.

ಶಾಲೆಗಳಲ್ಲಿ ಶೌಚಾಲಯಗಳ ನಿರ್ಮಾಣಕ್ಕಾಗಿ ಘಟಕ ವೆಚ್ಚವನ್ನು ರೂ.35000/-ಗಳಿಗೆ ಏರಿಕೆಯಾಗಿರುತ್ತದೆ. ಆದ್ದರಿಂದ, ಯಾವ ಶಾಲೆಗಳಲ್ಲಿ ಶೌಚಾಲಯಗಳು ಇರುವುದಿಲ್ಲ ಅಂತಹ ಶಾಲೆಗಳಿಗೆ ಶೌಚಾಲಯಗಳನ್ನು ಕಡ್ಡಾಯವಾಗಿ ನಿರ್ಮಾಣ ಮಾಡಲು ಶಾಲೆಗಳ ಪಟ್ಟಿಯನ್ನು ನೀಡಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿಯವರಿಗೆ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಸಿ.ಎಸ್.ಪ್ರಕಾಶ್ ರವರು ಮಾತನಾಡುತ್ತಾ, 12ನೇ ಹಣಕಾಸು ರಸ್ತೆ ಯೋಜನೆಯಡಿ ಹಣ ಬಿಡುಗಡೆಯಾಗಿರುವುದಿಲ್ಲ. ಈ ಬಗ್ಗೆ ವಿವರ ನೀಡಬೇಕೆಂದು ಕೋರಿದರು.

ಮುಖ್ಯ ಯೋಜನಾಧಿಕಾರಿಯವರು ಮಾತನಾಡುತ್ತಾ, 12ನೇ ಹಣಕಾಸು ರಸ್ತೆ ಯೋಜನೆಯಡಿ ಸರ್ಕಾರದ ನಿರ್ದೇಶನದಂತೆ ನಿಗದಿಯಾಗಿದ್ದ ಅನುದಾನಕ್ಕೆ ಶೇ.25ರಷ್ಟು ಹೆಚ್ಚುವರಿ ಅನುದಾನಕ್ಕೆ ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿ ಸಲ್ಲಿಸಲಾಗಿತ್ತು. ಸರ್ಕಾರದಿಂದ ಹೆಚ್ಚುವರಿಯಾಗಿ ಸಿದ್ದಪಡಿಸಿ ಕಳುಹಿಸಿದ್ದ ಹಾಗೂ ಒಂದು ಸಾಲಿನ ಕ್ರಿಯಾ ಯೋಜನೆಯ ಕಾಮಗಾರಿಗಳಿಗೆ

ಅನುದಾನ ಬಿಡುಗಡೆಯಾಗಿರುವುದಿಲ್ಲ. ಆದ್ದರಿಂದ, ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.

ವಯಸ್ಕರ ಶಿಕ್ಷಣ ಇಲಾಖೆಯ ವತಿಯಿಂದ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂಬ ಬಗ್ಗೆ ಪೂರ್ಣ ವಿವರಗಳನ್ನು ನೀಡುವಂತೆ ಮತ್ತು ಸರ್ಕಾರದಿಂದ ಬಂದಿರುವ ಎಲ್ಲಾ ಸುತ್ತೋಲೆ ಮತ್ತು ಆದೇಶಗಳನ್ನು ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ನೀಡಲು ಕ್ರಮ ವಹಿಸಬೇಕೆಂದು ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಯವರಿಗೆ ತಿಳಿಸಿದರು.

ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಯವರು ಮಾತನಾಡುತ್ತಾ, ಡಾ: ನಂಜುಂಡಪ್ಪ ವರದಿ ಆಧಾರದ ಮೇಲೆ ಜಿಲ್ಲೆಯ 5 ತಾಲ್ಲೂಕುಗಳಿಗೆ ಮುಂದುವರೆದ ಶಿಕ್ಷಣ ಕಾರ್ಯಕ್ರಮ ಮಂಜೂರಾಗಿದ್ದು, ಸೆಪ್ಟೆಂಬರ್ ಮಾಹೆಯಿಂದ ಪ್ರಾರಂಭ ಮಾಡಬೇಕಾಗಿರುತ್ತದೆ ಎಂದು ಸಭೆಗೆ ವಿವರ ನೀಡಿದರು.

ಸಹಾಯಕ ನಿರ್ದೇಶಕರು, ಜಿಲ್ಲಾ ಯುವಜನ ಮತ್ತು ಕ್ರೀಡಾ ಇಲಾಖೆ, ಹಾಸನ ಇವರು ಮಾತನಾಡುತ್ತಾ, ಗ್ರಾಮ ಪಂಚಾಯಿತಿಗಳಲ್ಲಿ ಆಟದ ಮೈದಾನ ನಿರ್ಮಾಣ ಮಾಡಲು ಜಿಲ್ಲಾ ಪಂಚಾಯಿತಿಯಿಂದ ನೇರವಾಗಿ ಗ್ರಾಮ ಪಂಚಾಯಿತಿಗಳಿಗೆ ರೂ.1.00ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ ಎಂದು ವಿವರ ನೀಡಿದರು.

ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಯಾವ ಉದ್ದೇಶಕ್ಕಾಗಿ ಹಣವನ್ನು ಬಿಡುಗಡೆ ಮಾಡಲಾಗಿದೆ ಅದೇ ಉದ್ದೇಶಕ್ಕೆ ವಿನಿಯೋಗ ಮಾಡಲಾಗಿದೆಯೇ? ಎಂಬ ಬಗ್ಗೆ ಪರಿಶೀಲನೆ ನಡೆಸಬೇಕೆಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಸಿ.ಎಸ್.ಪ್ರಕಾಶ್ ರವರು ಮಾತನಾಡುತ್ತಾ, ಬೇಲೂರು ತಾಲ್ಲೂಕು ತೊಳಲು ಪ್ರೌಢಶಾಲೆಗೆ ಮೈದಾನ ಸಮತಟ್ಟು ಮಾಡಲು ಅನುದಾನ ಬಿಡುಗಡೆ ಮಾಡಬೇಕೆಂದು ಕೋರಿದರು.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಬೇಲೂರು ತಾಲ್ಲೂಕು ತೊಳಲು ಪ್ರೌಢಶಾಲೆಗೆ ಮೈದಾನ ಸಮತಟ್ಟು ಮಾಡಲು ಕ್ರಮ ವಹಿಸಬೇಕೆಂದು ಉಪ ಕಾರ್ಯದರ್ಶಿ(ಆಡಳಿತ)ರವರು ಕ್ಷೇತ್ರ ಶಿಕ್ಷಣಾಧಿಕಾರಿ, ಬೇಲೂರು ಇವರಿಗೆ ತಿಳಿಸಿದರು.

ಮುಂದುವರೆದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ 24/7 ನಿರಂತರ ಆಸ್ಪತ್ರೆಗಳಿಗೆ ರಾತ್ರಿ ವೇಳೆಯಲ್ಲಿ ಭೇಟಿ ನೀಡಿ ಆರೋಗ್ಯ ಕೇಂದ್ರಗಳು ಸಮರ್ಪಕವಾಗಿ ಕೆಲಸ ನಿರ್ವಹಿಸುತ್ತಿವೆಯೇ? ಎಂಬ ಬಗ್ಗೆ ಪರಿಶೀಲನೆ ನಡೆಸಲಾಗುವುದೆಂದು ತಿಳಿಸಿದರು.

ಮುಂದುವರೆದು, ಆಯುಷ್ ಇಲಾಖೆಯಡಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಔಷಧಿ ಗಿಡಗಳನ್ನು ಬೆಳೆಸಲು ಮತ್ತು ಸ್ಥಳೀಯವಾಗಿ ದೊರೆಯುವ ಔಷಧಿಗಿಡಗಳನ್ನು ಆಯುಷ್ ಇಲಾಖೆಯ ಆಸ್ಪತ್ರೆಗಳ ಆವರಣ ಮತ್ತು ಶಾಲೆಗಳ ಆವರಣಗಳಲ್ಲಿ ಬೆಳೆಯಲು ಕ್ರಮ ವಹಿಸಬೇಕೆಂದು ತಿಳಿಸಿದರು.

<table>
<tr><td></td><td>ಆಲೂರು ತಾಲ್ಲೂಕು ಹುಣಸವಳ್ಳಿ ಗ್ರಾಮ ಪಂಚಾಯಿತಿ, ಹೊಳೆ ಬೆಳ್ಳೂರು ಮತ್ತು ಬಂಡಿತಿಮ್ಮನಹಳ್ಳಿ ಗ್ರಾಮಗಳಿಗೆ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಬಗ್ಗೆ.</td><td>ಟಿಪ್ಪಣಿ ಸಂಖ್ಯೆ: ಜಿಪಂಹಾ/ಆಡಳಿತ(3) ಗ್ರಾನೀಸ 42 /2010-11 ದಿನಾಂಕ: 25-08-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಆಲೂರು ತಾಲ್ಲೂಕು, ಹುಣಸವಳ್ಳಿ ಗ್ರಾಮ ಪಂಚಾಯಿತಿ, ಹೊಳೆ ಬೆಳ್ಳೂರು ಮತ್ತು ಬಂಡಿತಿಮ್ಮನಹಳ್ಳಿ ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಮಾಡುವ ಕೊಳವೆ ಬಾವಿಯ ಇಳುವರಿ ಕಡಿಮೆಯಾಗಿದ್ದು, ಸದರಿ ಕೊಳವೆ ಬಾವಿಯು ಕೆರೆಯ ಒಳಭಾಗದಲ್ಲಿದ್ದು, ಈ ಕೆರೆಯು ವಾಟೆಹೊಳೆ ಜಲಾಶಯ ವ್ಯಾಪ್ತಿಗೊಳಪಟ್ಟಿರುತ್ತದೆ. ಹಾಲಿ ಇರುವ ಕೊಳವೆ ಬಾವಿಯ ಆಸುಪಾಸಿನಲ್ಲಿ ಬೇರೆ ಕೊಳವೆ ಬಾವಿಯನ್ನು ಕೊರೆಯಲು ಸಾಧ್ಯವಿಲ್ಲದ ಕಾರಣ, ಬೇರೆ ಸ್ಥಳದಲ್ಲಿ ಹೊಸದಾಗಿ ಜಲಮೂಲ ಗುರುತಿಸಿ, ಕೊಳವೆ ಬಾವಿಯು ಸಫಲವಾದಲ್ಲಿ ರೈಸಿಂಗ್ ಪೈಪ್ ಲೈನ್, ಪಂಪ್ ಹೌಸ್, ಪಂಪ್ ಸೆಟ್ ಹಾಗೂ ವಿದ್ಯುತ್ ಠೇವಣಿ ಇವುಗಳಿಗಾಗಿ ಸುಮಾರು ರೂ.3.50ಲಕ್ಷಗಳ ಅನುದಾನದ ಅವಶ್ಯಕತೆಯಿದ್ದು, ಸದರಿ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡುವಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಇವರು ಕೋರಿರುತ್ತಾರೆ.</td><td>ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಇವರು ಕೋರಿರುವಂತೆ ಆಲೂರು ತಾಲ್ಲೂಕು, ಹುಣಸವಳ್ಳಿ ಗ್ರಾಮ ಪಂಚಾಯಿತಿ, ಹೊಳೆ ಬೆಳ್ಳೂರು ಮತ್ತು ಬಂಡಿತಿಮ್ಮನಹಳ್ಳಿ ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಮಾಡಲು ರೂ.3.50 ಲಕ್ಷಗಳ ಅನುದಾನದಲ್ಲಿ ಕಾಮಗಾರಿಯನ್ನು ಅನುಷ್ಠಾನ ಮಾಡಲು ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು.</td></tr>
<tr><td>2</td><td>ಜಿಲ್ಲಾ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯ ಯೋಜನೆ ಮತ್ತು ಯೋಜನೇತರ ಲೆಕ್ಕಶೀರ್ಷಿಕೆ ಅಡಿ ಇರುವ ಅನುದಾನವನ್ನು ವಿವಿಧ ಶಿಕ್ಷಣ ಸಂಸ್ಥೆಗಳಿಗೆ ಕ್ರೀಡಾ ಚಟುವಟಿಕೆ ನಡೆಸಲು ಬಿಡುಗಡೆ ಮಾಡುವ ಬಗ್ಗೆ.</td><td>ಟಿಪ್ಪಣಿ ಸಂಖ್ಯೆ: ಜಿಪಂಹಾ/ಆಡಳಿತ(4) ಯುಸೇಕ್ರೀ/2010-11 ದಿನಾಂಕ: 28-08-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಸಹಾಯಕ ನಿರ್ದೇಶಕರು, ಜಿಲ್ಲಾ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ, ಹಾಸನ ಇವರು 2010-11ನೇ ಸಾಲಿಗೆ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಒದಗಿಸಿರುವ ಅನುದಾನವನ್ನು ಜಿಲ್ಲೆಯ ವಿವಿಧ ಶಿಕ್ಷಣ ಸಂಸ್ಥೆಗಳಿಗೆ ಬಿಡುಗಡೆ ಮಾಡಬೇಕಾಗಿದ್ದು, ಅನುಮೋದನೆ ನೀಡಬೇಕೆಂದು ಕೋರಿರುತ್ತಾರೆ. ವಿವರ ಕೆಳಕಂಡಂತಿರುತ್ತದೆ.<br><table><tr><th>ಕ್ರಸಂ</th><th>ಲೆಕ್ಕಶೀರ್ಷಿಕೆ ಮತ್ತು ಹೆಸರು</th><th>ಒದಗಿಸಲಾದ ಅನುದಾನ</th><th>ಹಂಚಿಕೆ ಮಾಡಿರುವ ಅನುದಾನ ಮತ್ತು ಶಾಲೆಗಳ ಸಂಖ್ಯೆ</th></tr><tr><td>1</td><td>2204-00-104-0-06 ಗ್ರಾಮೀಣ ಕ್ರೀಡಾ ಕೇಂದ್ರಗಳು (ಯೋಜನೆ)</td><td>ರೂ.5.00ಲಕ್ಷ ಗಳು</td><td>ರೂ.12500 X 40</td></tr></table></td><td>ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಪರಿಶೀಲಿಸಲಾಯಿತು.<br>ಸಹಾಯಕ ನಿರ್ದೇಶಕರು, ಜಿಲ್ಲಾ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ, ಹಾಸನ ಇವರು ಕೋರಿರುವಂತೆ 2010-11ನೇ ಸಾಲಿಗೆ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಒದಗಿಸಿರುವ ಅನುದಾನವನ್ನು ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಜಿಲ್ಲೆಯ ವಿವಿಧ ಶಿಕ್ಷಣ ಸಂಸ್ಥೆಗಳಿಗೆ ಬಿಡುಗಡೆ ಮಾಡಲು ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು.</td></tr>
</table>

| | | | |
|---|---|---|---|
| | | 2 — 2204-00-104-0-05 ಕ್ರೀಡೆ ಮತ್ತು ಪಂದ್ಯಗಳು ವಿದ್ಯಾರ್ಥಿ ಮತ್ತು ವಿದ್ಯಾರ್ಥಿಯೇತರರಿಗೆ ಸಹಾಯ ( ಯೋಜನೇತರ) 2204-00-104-0-10 ಕ್ರೀಡಾ ಸಾಮಗ್ರಿ ಕೊಳ್ಳಲು, ಕ್ರೀಡಾ ಬಯಲುಗಳನ್ನು ಅಭಿವೃದ್ಧಿ ಪಡಿಸಲು ವಿದ್ಯಾರ್ಥಿ ಹಾಗೂ ಇತರೆ ಸಂಸ್ಥೆಗಳಿಗೆ ಸಹಾಯ (ಯೋಜನೇತರ) — ರೂ.1.36ಲಕ್ಷ ಗಳು, ರೂ.0.97ಲಕ್ಷ ಗಳು — ರೂ.6000 X 12, ರೂ.6250 X 4, ರೂ.5650 X 20, ರೂ.5750 X 4<br>ಮೇಲ್ಕಂಡ 3 ಲೆಕ್ಕಶೀರ್ಷಿಕೆಗಳ ಒಟ್ಟು ಮೊತ್ತ ರೂ.7.33ಲಕ್ಷಗಳಲ್ಲಿ ಜಿಲ್ಲೆಯ 80 ಶಿಕ್ಷಣ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡಲು ಅನುಮೋದನೆಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. | |
| | **ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರ ವಿಷಯಗಳು** | | |
| 1 | 2010-11ನೇ ಸಾಲಿನಲ್ಲಿ ಜಿಲ್ಲಾ ವಲಯ ಯೋಜನೆ ಅಡಿಯ ಲಿಂಕ್ ಡಾಕ್ಯುಮೆಂಟಿನಲ್ಲಿ ನಿಗದಿಯಾದ ಅನುದಾದಲ್ಲಿ ಪ್ರೌಢ ಶಾಲೆಗಳ ಪೀಠೋಪಕರಣಗಳ ಖರೀದಿಯ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ. | 2010-11ನೇ ಸಾಲಿನಲ್ಲಿ ಜಿಲ್ಲಾ ವಲಯ ಯೋಜನೆಯಡಿ ಲಿಂಕ್ ಡಾಕ್ಯುಮೆಂಟಿನಲ್ಲಿ ನಿಗದಿಯಾದ ರೂ.16.00ಲಕ್ಷಗಳ ಅನುದಾನದಲ್ಲಿ ಸರ್ಕಾರಿ ಪ್ರೌಢಶಾಲೆಗಳಿಗೆ ಪೀಠೋಪಕರಣಗಳನ್ನು ಖರೀದಿಸಿ ನೀಡಲು ಸಿದ್ಧಪಡಿಸಿ ಸಲ್ಲಿಸಿರುವ ಪ್ರೌಢಶಾಲೆಗಳ ಪಟ್ಟಿಗೆ ಅನುಮೋದನೆ ನೀಡುವಂತೆ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಕೋರಿರುವಂತೆ 2010-11ನೇ ಸಾಲಿನಲ್ಲಿ ಜಿಲ್ಲಾ ವಲಯ ಯೋಜನೆಯಡಿ ಲಿಂಕ್ ಡಾಕ್ಯುಮೆಂಟಿನಲ್ಲಿ ನಿಗದಿಪಡಿಸಿರುವ ರೂ.16.00(ರೂಪಾಯಿ ಹದಿನಾರು ಲಕ್ಷಗಳು ಮಾತ್ರ)ಗಳಲ್ಲಿ ಸರ್ಕಾರಿ ಪ್ರೌಢಶಾಲೆಗಳಿಗೆ ಪೀಠೋಪಕರಣಗಳನ್ನು ಖರೀದಿಸಿ ನೀಡಲು ಸಿದ್ಧಪಡಿಸಿ ಸಲ್ಲಿಸಿರುವ ಪ್ರೌಢಶಾಲೆಗಳ ಪಟ್ಟಿಗೆ ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 2 | ಶೌಚಾಲಯ ನಿರ್ಮಾಣ ಮಾಡಿಕೊಡುವ ಬಗ್ಗೆ | ಮಾನ್ಯ ಸದಸ್ಯರಾದ ಶ್ರೀ ಹೆಚ್.ಡಿ.ರಾಮೇಗೌಡರವರು ಮಾತನಾಡುತ್ತಾ, ಪ್ರೌಢಶಾಲೆ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜು ಚಾಕೇನಹಳ್ಳಿ ಹೊಳೆನರಸೀಪುರ ತಾಲ್ಲೂಕು ಇಲ್ಲಿ ಶೌಚಾಲಯದ ವ್ಯವಸ್ಥೆಯಿರುವುದಿಲ್ಲ. ಇಲ್ಲಿ ವಿದ್ಯಾರ್ಥಿನಿಯರು ಮತ್ತು ಮಹಿಳಾ ಶಿಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಶೌಚಾಲಯ ಇಲ್ಲದೆ ಇರುವುದರಿಂದ, ಬಹಳ ತೊಂದರೆಯಾಗಿರುತ್ತದೆ. ಆದುದರಿಂದ, | ಸಭೆಯಲ್ಲಿ ವಿಷಯದ ಬಗ್ಗೆ ವಿವರಾಗಿ ಚರ್ಚಿಸಲಾಯಿತು.<br>ಹೊಳೆನರಸೀಪುರ ತಾಲ್ಲೂಕು ಚಾಕೇನಹಳ್ಳಿ ಗ್ರಾಮದಲ್ಲಿರುವ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜಿಗೆ ಅವಶ್ಯವಿರುವ |

| | | | |
|---|---|---|---|
| | | ವಿದ್ಯಾರ್ಥಿನಿಯರ ಹಿತದೃಷ್ಟಿಯಿಂದ ಇಲ್ಲಿ ವಿದ್ಯಾರ್ಥಿಗಳಿಗೂ ಹಾಗೂ ಶಿಕ್ಷಕರಿಗೂ ಪ್ರತ್ಯೇಕವಾಗಿ ಶೌಚಾಲಯ ನಿರ್ಮಿಸಿಕೊಡಬೇಕೆಂದು ಮುಖ್ಯ ಶಿಕ್ಷಕರು ಮನವಿ ಮಾಡಿದ್ದು ಈ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳಬೇಕೆಂದು ಕೋರಿರುತ್ತಾರೆ. | ಶೌಚಾಲಯಗಳನ್ನು ನಿರ್ಮಾಣ ಮಾಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 3 | ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ | ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಐಎಂಐಎಸ್ ನಲ್ಲಿ ಅಳವಡಿಸಿರುವ ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಸರ್ಕಾರದಿಂದ ಪ್ರಸಕ್ತ ಸಾಲಿಗೆ ಬಿಡುಗಡೆಯಾಗಿರುವ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗುತ್ತದೆ ಎಂಬ ಬಗ್ಗೆ ಪೂರ್ಣ ವಿವರಗಳನ್ನು ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳ ಗಮನಕ್ಕೆ ತರಬೇಕೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎಸ್.ಪ್ರಕಾಶ್ ರವರು ಮಾತನಾಡುತ್ತಾ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ವತಿಯಿಂದ ಅನುಷ್ಠಾನ ಮಾಡುವ ಕಾಮಗಾರಿಗಳಿಗೆ ನಾಮಫಲಕಗಳನ್ನು ಹಾಕಬೇಕೆಂದು ತಿಳಿಸಿದ್ದರೂ ಸಹ ಯಾವುದೇ ಕ್ರಮ ವಹಿಸಿರುವುದಿಲ್ಲ. ಈ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮ ವಹಿಸಬೇಕೆಂದು ಕೋರಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಮಾನ್ಯ ಸದಸ್ಯರು ಪ್ರಸ್ತಾಪಿಸಿರುವ ವಿಷಯದ ಬಗ್ಗೆ ಎರಡೂ ವಿಭಾಗಗಳ ಕಾರ್ಯಪಾಲಕ ಅಭಿಯಂತರರು ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರುಗಳು ಕಾಮಗಾರಿಗಳಿಗೆ ಕಡ್ಡಾಯವಾಗಿ ನಾಮಫಲಕಗಳನ್ನು ಹಾಕಲು ಕ್ರಮ ವಹಿಸಬೇಕೆಂದು ತಿಳಿಸಿದರು. | |
| | | ವಂದನೆಗಳೊಂದಿಗೆ ಸಭೆಯಲ್ಲಿ ಮುಕ್ತಾಯಗೊಳಿಸಲಾಯಿತು. | |

ಬಿ.ಆರ್. ನೀಲಪ್ಪ

(ಬಿ.ಆರ್.ನೀಲಪ್ಪ)

ಅಧ್ಯಕ್ಷರು

ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ

ಜಿಲ್ಲಾ ಪಂಚಾಯಿತಿ, ಹಾಸನ